ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 15–3–2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | Bangalore Medical College Graduation Day:<br>Chief Guest:<br><br>Dr. Sharanaprakash Patil, Minister for Medical Education<br><br>Padama Vibhushan<br>Dr. V . Shanta, Chairman, Cancer Institute Adyar, Chennai. | 16-03-2016<br>Tuesday<br>10-00 AM | Sree Kanteerava Indoor Stadium, Bengaluru. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪ್ಲಾಸ್ಟಿಕ್ ನಿಷೇಧ : ಸರ್ಕಾರದ ಆದೇಶ ಜಾರಿ

ಬೆಂಗಳೂರು, ಮಾರ್ಚ್ 15 (ಕರ್ನಾಟಕ ವಾರ್ತೆ)

ಪ್ಲಾಸ್ಟಿಕ್ ಕ್ಯಾರಿಬ್ಯಾಗ್ ಹಾಗೂ ದೈನಂದಿನ ಬಳಕೆಯಲ್ಲಿರುವ ಇತರೆ ಪ್ಲಾಸ್ಟಿಕ್ ವಸ್ತುಗಳು ಅಲ್ಪಾವಧಿ ಹಾಗೂ ದೀರ್ಘಾವಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡಲು ಕಾರಣವಾಗಿರುತ್ತದೆ.

ಭಾರತದ ಸಂವಿಧಾನದ ಕಲಾಂ–48ಎ ಅನ್ವಯ, ಪ್ರತಿ ರಾಜ್ಯ ಸರ್ಕಾರವೂ ಪರಿಸರ ಮಟ್ಟವನ್ನು ಉತ್ತಮಪಡಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ.

ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚಗಳು, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತು ಥರ್ಮೋಕೋಲ್‌ನಿಂದ ತಯಾರಾದ ವಸ್ತುಗಳ ವ್ಯಾಪಕ ಬಳಕೆಯಿಂದ ಪರಿಸರಕ್ಕೆ ಹಾನಿ ಹಾಗೂ ಮಾನವ ಮತ್ತಿತರ ಪ್ರಾಣಿಗಳು ಆರೋಗ್ಯಕ್ಕೆ ಅಪಾಯ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಪ್ಲಾಸ್ಟಿಕ್ ತ್ಯಾಜ್ಯಗಳು ಚರಂಡಿಗಳ, ಮೋರಿಗಳ ಮತ್ತು ಒಳಚರಂಡಿಗಳ ಸರಾಗ ಹರಿವಿಗೆ ತಡೆಯನ್ನು ಉಂಟುಮಾಡುವುದರ ಜೊತೆಗೆ ನಗರ ಪ್ರದೇಶಗಳಲ್ಲಿನ ಜಲಕಾಯಗಳಮಾಲಿನ್ಯಕ್ಕೆ ಕಾರಣವಾಗುತ್ತಿರುವುದನ್ನು ಗಮನಿಸಲಾಗಿದೆ.

ಆದುದರಿಂದ, ಇಂತಹ ಸಮಸ್ಯೆಗಳು ಪುನರಾವರ್ತನೆಯಾಗದಂತೆ ಪರಿಣಾಮಕಾರಿಯಾಗಿ ತಡೆಯುವ ದೃಷ್ಟಿಯಿಂದ, ರಾಜ್ಯ ಸರ್ಕಾರಕ್ಕೆ ಪ್ರದತ್ತವಾಗಿರುವ ಪರಿಸರ (ಸಂರಕ್ಷಣೆ) ಕಾಯಿದೆ 1986 ರ ಸೆಕ್ಷನ್ 5 ರಲ್ಲಿನ ಅಧಿಕಾರವನ್ನು ಚಲಾಯಿಸಿ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೋಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್‌ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು ಮತ್ತು ಬಳಕೆಯನ್ನು ನಿಷೇಧಿಸಿ ಸರ್ಕಾರ ನಿರ್ದೇಶನವನ್ನು ಹೊರಡಿಸಿದೆ. ಈ ಅಧಿಸೂಚನೆಯನ್ವಯ ಈಗಾಗಲೇ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಣೆ ಹೊರಡಿಸಲಾಗಿದೆ.

ಬಾಬು:ಜಿಪಿಆರ್

# <u>ಸಂದರ್ಶನ</u>

ಬೆಂಗಳೂರು, ಮಾರ್ಚ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯ ಸರ್ಕಾರದ ತೋಟಗಾರಿಕೆ ಇಲಾಖೆಯಲ್ಲಿನ 7 ಸಹಾಯಕ ತೋಟಗಾರಿಕಾ ನಿರ್ದೇಶಕರ ಹುದ್ದೆಗೆ ಮಾರ್ಚ್ 16 ರಂದು ಹಾಗೂ ತೋಟಗಾರಿಕೆ ಇಲಾಖೆಯಲ್ಲಿನ 263 ತೋಟಗಾರಿಕಾ ಸಹಾಯಕ ಹುದ್ದೆಗೆ ಮಾರ್ಚ್ 16 ರಿಂದ 18 ರವರೆಗೆ, 21 ರಿಂದ 24 ಹಾಗೂ 28 ರಿಂದ 30 ರವರೆಗೆ ಅರ್ಹ ಅಭ್ಯರ್ಥಿಗಳಿಗೆ ಆಯೋಗದ ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಸಂದರ್ಶನ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ಸೂಚನಾ ಪತ್ರವನ್ನು ಕಳುಹಿಸಲಾಗಿದೆ. ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ **"http://kpsc.kar.nic.in/Eligibility List"** ರಲ್ಲಿ ಪ್ರಕಟಿಸಲಾಗಿದೆ.

ಬಾಬು:ಜಿಪಿಆರ್

# ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು (ಗ್ರೂಪ್–ಎ) ಮತ್ತು ಲೆಕ್ಕಪರಿಶೋಧನಾಧಿಕಾರಿ (ಗ್ರೂಪ್–ಬಿ) ವೃಂದದ ಒಟ್ಟು 162 ಹುದ್ದೆಗಳನ್ನು ಭರ್ತಿಮಾಡಲು ದಿನಾಂಕ: 11–03–2016 ರಂದು ಅಧಿಸೂಚನೆಯನ್ನು ಹೊರಡಿಸಿದ್ದು ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ದಿನಾಂಕ: 14–03–2016 ರಿಂದ 15–04–2016 ರವರೆಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಶುಲ್ಕ ಪಾವತಿಸಲು ಕೊನೆಯ ದಿನಾಂಕ: 16–04–2016 ಆಗಿರುತ್ತದೆ. ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ **http://kpsc.kar.nic.in/Notification** ಅನ್ನು ನೋಡಬಹುದಾಗಿದೆ.

ಬಾಬು:ಜಿಪಿಆರ್

**ಛಾಯಾಚಿತ್ರ ಶೀರ್ಷಿಕೆ:**

ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿ ಖಾತೆ ಸಚಿವ ಶ್ರೀ ಆರ್. ರೋಷನ್‌ಬೇಗ್ ಅವರು ಇಂದು ಶಿವಾಜಿನಗರ ವಿಧಾನ ಸಭಾ ಕ್ಷೇತ್ರದ ವಿವಿದೆಡೆ ಭೇಟಿ ಸಾರ್ವಜನಿಕ ಕುಂದು ಕೊರತೆಗಳನ್ನು ಪರಿಶೀಲಿಸಿದರು.